ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 170 ಸ್ಲೀಮರ 2018(ಭಾಗ-7)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:13-04-2020

## ಆದೇಶ

ವಿಷಯ:- COVID -19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ನೌಕರರು/ ಕಾರ್ಮಿಕರನ್ನು ಕೆಲಸದಿಂದ ವಜಾಗೊಳಸದಂತೆ ಹಾಗೂ ವೇತನವನ್ನು ಕಡಿತಗೊಳಸದಿರುವ ಬಗ್ಗೆ.

ಉಲ್ಲೇಖ:
1. ಸಮ ಸಂಖ್ಯೆ ಸರ್ಕಾರದ ಸುತ್ತೋಲೆ ದಿನಾಂಕ:21-03-2020.
2. ಸರ್ಕಾರದ ಆದೇಶ ಸಂಖ್ಯೆ: ಕಂಇ 178 ಟಿ.ಎಸ್ .ಆರ್ 2020 ದಿನಾಂಕ: 30-03-2020

****

ಕ್ಯಾಪ್ಟನ್ ಮಣಿವಣ್ಣನ್.ಭಾ.ಆ.ಸೇ, ಕಾರ್ಯದರ್ಶಿ, ಕಾರ್ಮಿಕ ಇಲಾಖೆ ಮತ್ತು ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ ಆದ ನಾನು ಸರ್ಕಾರದ ಆದೇಶ ಸಂಖ್ಯೆ: ಕಂಇ 178 ಟಿ.ಎಸ್ .ಆರ್ 2020 ದಿನಾಂಕ:30-03-2020ರಲ್ಲಿ ವಿಪತ್ತು ನಿರ್ವಹಣೆ ಕಾಯ್ದೆ 2005 ಸೆಕ್ಷನ್ 69ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶಿಸುತ್ತಿದ್ದೇನೆ.

COVID -19 ತುರ್ತು ಪರಿಸ್ಥಿತಿಯ ಸನ್ನಿವೇಶದಲ್ಲಿ ಎಲ್ಲಾ ಸಾರ್ವಜನಿಕ / ಖಾಸಗಿ ಸಂಸ್ಥೆಗಳ ಉದ್ಯೋಗದಾತರು ತಮ್ಮ ಉದ್ಯೋಗಿಗಳನ್ನು, ವಿಶೇಷವಾಗಿ casual ಕೆಲಸಗಾರರರನ್ನು ಅಥವಾ ಗುತ್ತಿಗೆ ಕಾರ್ಮಿಕರನ್ನು ಕೆಲಸದಿಂದ ವಜಾಗೊಳಸಬಾರದೆಂದು ಮತ್ತು ಅವರ ವೇತನವನ್ನು ಕಡಿತಗೊಳಸಬಾರದೆಂದು ಸೂಚಿಸಿದೆ. ಯಾವುದೇ ಕೆಲಸಗಾರರು ಈ ಅವಧಿಯಲ್ಲಿ ರಜೆ ತೆಗೆದುಕೊಂಡಿದ್ದಲ್ಲಿ ಅವರ ವೇತನದಲ್ಲಿ ಯಾವುದೇ ಪರಿಣಾಮಕಾರಿ ಕಡಿತವಿಲ್ಲದೇ, ಅಂತಹ ಕೆಲಸಗಾರರನ್ನು ಕರ್ತವ್ಯದಲ್ಲಿದ್ದಾರೆಂದು ಪರಿಗಣಿಸುವುದು. ಇದಲ್ಲದೇ COVID-19 ಕಾರಣದಿಂದಾಗಿ ಉದ್ಯೋಗದ ಸ್ಥಳದಲ್ಲಿ ಕಾರ್ಯನಿರ್ವಹಿಸದಿರುವ ಸಂದರ್ಭ ಉಂಟಾದಲ್ಲಿ ಅಂತಹ ಘಟಕದ (Working Unit) ನೌಕರರು ಕರ್ತವ್ಯದಲ್ಲಿದ್ದಾರೆಂದು ಪರಿಗಣಿಸುವುದು.

ಮುಂದುವರೆದು, ಈ ಸಂಬಂಧ ಮಾಡುವ ಯಾವುದೇ ಉಲ್ಲಂಘನೆಗಳು ವಿಪತ್ತು ನಿರ್ವಹಣೆ ಕಾಯ್ದೆ 2005 ರಡಿ ದಂಡನೆಯ ಕ್ರಮಕ್ಕೆ ಒಳಪಟ್ಟಿರುತ್ತದೆ. ಕಾರ್ಮಿಕ ಇಲಾಖೆಯು ಈ ನಿಟ್ಟಿನಲ್ಲಿ 48 ಗಂಟೆಯೊಳಗಾಗಿ ಸಹಾಯವಾಣಿಯನ್ನು ಸ್ಥಾಪಿಸಲು ಕ್ರಮ ಕೈಗೊಳ್ಳುವುವು.

13/4

(ಪಿ. ಕ್ಯಾಪ್ಟನ್ ಮಣಿವಣ್ಣನ್)
ಸರ್ಕಾರದ ಕಾರ್ಯದರ್ಶಿ
ಕಾರ್ಮಿಕ ಇಲಾಖೆ

ಇವರಿಗೆ:
1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ಕಾರ್ಮಿಕ ಆಯುಕ್ತಾಯಲದ ಮೂಲಕ)
2. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
3. ಅಪರ ಕಾರ್ಮಿಕ ಆಯುಕ್ತರು, (ಆಡಳಿತ ಮತ್ತು ಲೆಕ್ಕಪತ್ರ) ಕಾರ್ಮಿಕ ಭವನ, ಬೆಂಗಳೂರು.